ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಕೊಡಗು ಜಿಲ್ಲೆಯಲ್ಲಿ ಕಾಡಾನೆಗಳ ಸ್ಥಳಾಂತರ ಕುರಿತು

ಶ್ರೀಮತಿ ಎಸ್.ವೀಣಾಅಚ್ಚಯ್ಯ (ವಿಧಾನಸಭೆ ಯಿಂದ ಚುನಾಯಿತರಾದವರು):-

873 (880) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಡಗು ಜಿಲ್ಲೆಯ ಹಲವಾರು ತೋಟಗಳಲ್ಲಿ ಕಾಡಾನೆಗಳು ಬೀಡು ಬಿಟ್ಟಿರುವುದರಿಂದ ರೈತರು ಹಾಗೂ ಕಾಫಿ ಬೆಳೆಗಾರರಿಗೆ ನಿರಂತರವಾಗಿ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಪ್ರಸ್ತುತ ವರ್ಷದಲ್ಲಿ ಎಷ್ಟು ಕಾಡಾನೆಗಳನ್ನು ಹಿಡಿಯಲು ಅನುಮತಿ ನೀಡಲಾಗಿದೆ;

(ಇ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಕಾಡಾನೆಗಳನ್ನು ಹಿಡಿದು ಸುರಕ್ಷಿತ ಪ್ರದೇಶಕ್ಕೆ ಸ್ಥಳಾಂತರ ಮಾಡಲಾಗಿದೆ? (ವರ್ಷವಾರು ಮಾಹಿತಿ ನೀಡುವುದು)